6. ಸತ್ಯನಾರಾಯಣ ಬಡಾವಣೆ ವಾಚನಾಲಯ
7. ಜೈಮಾರುತಿನಗರ ವಾಚನಾಲಯ
8. ಕಮಲಾನಗರ

ಆ) ಬಂದಿದೆ.

ಆಯ-ವ್ಯಯದ ಮಿತಿಯಲ್ಲಿ ನಿಯಮಾನುಸಾರ ಅಗತ್ಯತೆಗೆ ಹಾಗೂ ಬೇಡಿಕೆಗೆ ಅನುಸಾರವಾಗಿ ಪೀಠೋಪಕರಣಗಳನ್ನು ಖರೀದಿಸಲು ಕ್ರಮ ಕೈಗೊಳ್ಳಲಾಗುತ್ತದೆ.

ಇ) ಗ್ರಂಥಾಲಯಗಳಲ್ಲಿರುವ ಹಳೆಯ ಪುಸ್ತಕಗಳನ್ನು ವಿಲೇವಾರಿ ಮಾಡುವ ಸಂಬಂಧದಲ್ಲಿ ಪುಸ್ತಕಗಳ ಲಭ್ಯತೆ ಹಾಗೂ ಪ್ರಾಮುಖ್ಯತೆ ಬಗ್ಗೆ ಪರಿಶೀಲಿಸಿ ನಿಯಮಾನುಸಾರ ವಿಲೇವಾರಿ ಮಾಡಲಾಗುವುದು.

ಈ) ಇಲಾಖೆಯ ಸ್ವಂತ ಗ್ರಂಥಾಲಯ ಕಟ್ಟಡಗಳಲ್ಲಿ ಮೂಲಭೂತ ಸೌಕರ್ಯ ಒದಗಿಸಲಾಗಿದೆ. ನಂದಿನಿ ಬಡಾವಣೆಯಲ್ಲಿರುವ ಶಾಖಾ ಗ್ರಂಥಾಲಯದಲ್ಲಿ ಈ ಹಿಂದೆ ಬೋರ್‌ವೆಲ್‌ನಿಂದ ನೀರಿನ ಸೌಲಭ್ಯ ಹೊಂದಿದ್ದು, ಸದ್ಯದ ಪರಿಸ್ಥಿತಿಯಲ್ಲಿ ಬೋರ್‌ವೆಲ್‌ನಲ್ಲಿ ನೀರಿರುವುದಿಲ್ಲ. ಕಾರಣ ಹೊರಗಿನಿಂದ ಟ್ಯಾಂಕರ್‌ನಲ್ಲಿ ನೀರನ್ನು ತರಿಸಿ ಒದಗಿಸಲಾಗುತ್ತಿದೆ. ಸದ್ಯದಲ್ಲಿಯೇ ನೀರಿನ ವ್ಯವಸ್ಥೆಯನ್ನು ಮಾಡಲು ಕ್ರಮ ಕೈಗೊಳ್ಳಲಾಗುವುದು. ಬಿ.ಬಿ.ಎಂ.ಪಿ. ಹಾಗೂ ಖಾಸಗಿ (ಬಾಡಿಗೆ) ಕಟ್ಟಡಗಳಲ್ಲಿ ಗ್ರಂಥಾಲಯ ಸೇವೆಯನ್ನು ಒದಗಿಸಲಾಗುತ್ತಿದ್ದು ಮೂಲಭೂತ ಸೌಲಭ್ಯ ಹೊಂದಿಲ್ಲದಿರುವ ಕಡೆ ಸಂಬಂಧಿಸಿದ ಸಂಸ್ಥೆ ಹಾಗೂ ಮಾಲೀಕರಿಗೆ ಪತ್ರ ಬರೆದು ಮೂಲಭೂತ ಸೌಕರ್ಯ ಒದಗಿಸುವ ಬಗ್ಗೆ ಕ್ರಮ ಜರುಗಿಸಲಾಗುವುದು.

ಅಂಗವಿಕಲರಿಗೆ ನೀಡುತ್ತಿರುವ ಮಾಸಾಶನ

298 (725) ಶ್ರೀ ಶಿವಶಂಕರ್ ರೆಡ್ಡಿ (ಗೌರಿಬಿದನೂರು) :- ಮಾನ್ಯ ಉಪ ಮುಖ್ಯ ಮಂತ್ರಿಗಳು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:-

(ಅ) ಅಂಗವಿಕಲರಿಗೆ ನೀಡುತ್ತಿದ್ದ ಮಾಸಾಶನ ಸಧ್ಯಕ್ಕೆ ನಿಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಮಂಜೂರಾತಿ ನಿಲ್ಲಿಸಲು ಕಾರಣವೇನು; ಇದರಿಂದ ಅಂಗವಿಕಲರಿಗೆ ತುಂಬಾ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಸಮಸ್ಯೆಯನ್ನು ಬಗೆಹರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

ಶ್ರೀ ಕೆ.ಎಸ್. ಈಶ್ವರಪ್ಪ (ಮಾನ್ಯ ಉಪ ಮುಖ್ಯಮಂತ್ರಿಗಳು):-

ಅ) ಅಂಗವಿಕಲರಿಗೆ ಹಾಗೂ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳಡಿ ಅರ್ಹ ಫಲಾನುಭವಿಗಳಿಗೆ ಮಾಸಾಶನ ಪಾವತಿ ಸ್ಥಗಿತಗೊಳಿಸಿರುವುದಿಲ್ಲ.

ಆ) ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳಡಿ ಭೌತಿಕ ಪರಿಶೀಲನಾ ಕಾರ್ಯವನ್ನು ಕೈಗೆತ್ತಿಕೊಳ್ಳಲಾಗಿದ್ದ ಕಾರಣ ಹೊಸ ಮಂಜೂರಾತಿ ಕಾರ್ಯವನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿತ್ತು. ಆದರೆ ಈಗಾಗಲೇ ದಿನಾಂಕ: 06/01/2012 ರಿಂದ ರಾಜ್ಯದ್ಯಾಂತ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳಡಿ ಹೊಸ ಮಂಜೂರಾತಿ ಕಾರ್ಯವನ್ನು ಪ್ರಾರಂಭಿಸಲಾಗಿರುತ್ತದೆ.

ಹೊಸ ಮಂಜೂರಾತಿ ಕಾರ್ಯದಲ್ಲಿ ಯಾವುದೇ ಸಮಸ್ಯೆಗಳಿರುವುದಿಲ್ಲ.

ಕೈಗಾರಿಕಾ ಪ್ರದೇಶದಲ್ಲಿ ಅಂತರರ್ಜಲ ಕಲುಷಿತ

258 (562) ಶ್ರೀ ನರಸಿಂಹಸ್ವಾಮಿ ಜೆ. (ದೊಡ್ಡಬಳ್ಳಾಪುರ ಕ್ಷೇತ್ರ) :– ಮಾನ್ಯ ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಯೋಜನೆ ಮತ್ತು ಸಾಂಖ್ಯಿಕ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಬಾಶೆಟ್ಟಿಹಳ್ಳಿ, ದೊಡ್ಡಬಳ್ಳಾಪುರ ತಾಲ್ಲೂಕು ಕೈಗಾರಿಕಾ ಪ್ರದೇಶದಲ್ಲಿ ಅಂತರ್ಜಲ ಕಲುಶಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಹಾಗಿದ್ದರೆ, ಅದರ ಶುದ್ಧೀಕರಣಕ್ಕೆ ಸರ್ಕಾರ ಏನು ಕ್ರಮ ವಹಿಸಿದೆ ;

(ಆ) ದೊಡ್ಡಬಳ್ಳಾಪುರ ತಾಲ್ಲೂಕು, ಸಾಸಲು ಹೋಬಳಿ, ಬೊಮ್ಮೇನಹಳ್ಳಿ ಗ್ರಾಮದ ಹತ್ತಿರ ಟೆರ್ರಾ ಫಾರಂ ರವರಿಂದ ಬೆಂಗಳೂರು ನಗರದ ಘನ ತ್ಯಾಜ್ಯ ಸಂಗ್ರಹವಾಗಿ ಕಲುಶಿತವಾಗಿ ರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಆ ಭಾಗದಲ್ಲಿ ಮಾನವ ಸಂಕುಲ, ಪ್ರಾಣಿ ಸಂಕುಲ ಸಂಕಷ್ಟಕ್ಕೆ ಗುರಿಯಾಗಿದ್ದು, ಸರ್ಕಾರ ಈ ಬಗ್ಗೆ ಏನು ಕ್ರಮ ಕೈಗೊಂಡಿದೆ ?

ಶ್ರೀ ಎಸ್. ಶಿವಣ್ಣ (ಮಾನ್ಯ ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಯೋಜನೆ ಮತ್ತು ಸಾಂಖ್ಯಿಕ ಸಚಿವರು):–

(ಅ) i) ದೊಡ್ಡಬಳ್ಳಾಪುರ ತಾಲ್ಲೂಕಿನ ಬಾಶೆಟ್ಟಹಳ್ಳಿ, ಕೈಗಾರಿಕಾ ಪ್ರದೇಶದಲ್ಲಿ ಅಂತರ್ಜಲ ಭಾಗಶ ಕಲುಷಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ii) ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ (KIADB) ಸಾಮಾನ್ಯ ತ್ಯಾಜ್ಯ ನೀರು ಸಂಸ್ಕರಣಾ ಘಟಕ